## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಬಿ.ರಾಮಚಂದ್ರ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಸಿ.ಇ.ಚೆನ್ನಬಸಪ್ಪ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೊಳಕಾಲ್ಮೂರು ಇವರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

ಓದಲಾಗಿದೆ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಪತ್ರ ಸಂಖ್ಯೆ ಜಿ.ಪಂ./ಆ(3)/ ಸಿಸಿಎ/ ಸಿ.ಆರ್-34/2006-07 ದಿನಾಂಕ 06-12-2010.
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 1 ಇಎನ್‌ಕ್ಯೂ 2007 ದಿನಾಂಕ 20-07-2013.
3. ಶ್ರೀ ಬಿ.ಬಿ.ರಾಮಚಂದ್ರ ಮತ್ತು ಶ್ರೀ ಸಿ.ಇ.ಚೆನ್ನಬಸಪ್ಪ ರವರುಗಳು ಸಲ್ಲಿಸಿದ ಲಿಖಿತ ಹೇಳಿಕೆಗಳ ದಿನಾಂಕ 22-08-2013 ಮತ್ತು 26-08-2013.

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 06-12-2010ರ ಪತ್ರದಲ್ಲಿ ಶ್ರೀ ಬಿ.ಬಿ.ರಾಮಚಂದ್ರ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೊಳಕಾಲ್ಮೂರು ಮತ್ತು ಶ್ರೀ ಸಿ.ಇ.ಚನ್ನಬಸಪ್ಪ, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೊಳಕಾಲ್ಮೂರು ರವರುಗಳು ಈ ಹಿಂದೆ 2006-07ನೇ ಸಾಲಿನಲ್ಲಿ ಬರಪೀಡಿತ ಪ್ರದೇಶವೆಂದು ಘೋಷಿಸಲಾದ ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಮಂಜೂರಾಗಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳನ್ನು ನಿರ್ವಹಿಸವಾಗ ಯಾವುದೇ ಆಧುನಿಕ ಯಂತ್ರಗಳನ್ನು ಉಪಯೋಗಿಸಬಾರದೆಂದು ಸರ್ಕಾರದ ಆದೇಶವಿದ್ದಾಗ್ಯೂ ಈ ಆದೇಶವನ್ನು ಪಾಲಿಸದೇ ತಿಳಿಸುತ್ತಾ, ಸದರಿಯವರ ವಿರುದ್ಧ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ತಯಾರಿಸಿ ಸಲ್ಲಿಸಿದ್ದರು.

ಮೇಲ್ಕಂಡ ಆಪಾದಿತ ಅಧಿಕಾರಿ / ನೌಕರರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 20-07-2013ರಂದು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ಜಾರಿಮಾಡಲಾಗಿತ್ತು.

ಶ್ರೀ ಬಿ.ಬಿ.ರಾಮಚಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಸಿ.ಇ.ಚೆನ್ನಬಸಪ್ಪ, ಸಹಾಯಕ ಇಂಜಿನಿಯರ್ ವಿಭಾಗ-2. ಇವರುಗಳು ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕಗಳಂದು ಲಿಖಿತ ಸಮಜಾಯಿಷಿ ಸಲ್ಲಿಸಿ, ಅವರ ವಿರುದ್ಧ ಮಾಡಲಾದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಪ್ರಕರಣದಲ್ಲಿನ ಸತ್ಯಾಸತ್ಯತೆಯನ್ನು ತಿಳಿಯುವ ಸಂಬಂಧ, ಆರೋಪಿತ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

ಆದೇಶ ಸಂಖ್ಯೆ ಗ್ರಾಅಪ 1 ಇಎನ್‌ಕ್ಯೂ 2007 ಬೆಂಗಳೂರು, ದಿನಾಂಕ 23-10-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಬಿ.ಬಿ.ರಾಮಚಂದ್ರ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ,

----2

ಮೊಳಕಾಲ್ಮೂರು [ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಉಪ ವಿಭಾಗ, ಚಳ್ಳಕೆರೆ] ಮತ್ತು ಶ್ರೀ ಸಿ.ಇ.ಚನ್ನಬಸಪ್ಪ, ಹಿಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮೊಳಕಾಲ್ಮೂರು [ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚನ್ನಗಿರಿ] ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರಡಿ ಇಲಾಖಾ ವಿಚಾರಣೆ ನಡೆಸಲು ಅದೇ ನಿಯಮಾವಳಿಗಳ ನಿಯಮ 11(2)ರಡಿ ಶ್ರೀ ವಸಂತ್ ಹೆಚ್. ಮುಳಸಾವಳಗಿ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ಇಲಾಖಾ ವಿಚಾರಣಾಧಿಕಾರಿಗಳನ್ನಾಗಿ ಹಾಗೂ ನಿಯಮ 11(5)(ಸಿ)ರನ್ವಯ ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ-ಪಂಚಾಯತ್, ಚಿತ್ರದುರ್ಗ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ನಡೆಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
6. ಶ್ರೀ ವಸಂತ್ ಹೆಚ್. ಮುಳಸಾವಳಗಿ, ನಿವೃತ್ತ ಸಿವಿಲ್ ನ್ಯಾಯಾಧೀಶರು (ಹಿರಿಯ ವಿಭಾಗ) ವಸಂತ ವಿಹಾರ, ಎಂ.ಐ.ಜಿ. ಸಂಖ್ಯೆ.589, 20ನೇ ಮುಖ್ಯ ರಸ್ತೆ, 10ನೇ "ಬಿ" ಕ್ರಾಸ್, ಸೂರ್ಯನಗರ, ಮೊದಲನೇ ಫೇಸ್, ಹೊಸೂರು ರಸ್ತೆ, ಬೆಂಗಳೂರು. (ದೂರವಾಣಿ ಸಂಖ್ಯೆ. 9448214155)

----3

7. ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಚಿತ್ರದುರ್ಗ – ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಶ್ರೀ ಬಿ.ಬಿ.ರಾಮಚಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಉಪ ವಿಭಾಗ, ಚಳ್ಳಕೆರೆ.
9. ಶ್ರೀ ಸಿ.ಇ.ಚನ್ನಬಸಪ್ಪ, ಸಹಾಯಕ ಇಂಜಿನಿಯರ್ ವಿಭಾಗ-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚನ್ನಗಿರಿ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
11. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
14. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.